## ಪತ್ರಿಕಾ ತುಣುಕುಗಳು
## PAPER CLIPPINGS

40

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

# ಡೆಪ್ಯುಟಿ ಸ್ಪೀಕರ್ ಹುದ್ದೆಗೆ ಜಂಟಿ ಅಭ್ಯರ್ಥಿ

ನವದೆಹಲಿ: ಲೋಕಸಭೆಯ ಡೆಪ್ಯುಟಿ ಸ್ಪೀಕರ್ ಹುದ್ದೆಗೆ ಜಂಟಿ ಅಭ್ಯರ್ಥಿಯನ್ನು ಕಣಕ್ಕಿಳಿಸಲು ಪ್ರತಿಪಕ್ಷಗಳು ನಿರ್ಧರಿಸಿವೆ. ಕಾಂಗ್ರೆಸ್ ಪಕ್ಷದ ಸಂಸದೀಯ ಕಾರ್ಯತಂತ್ರ ಗುಂಪಿನ ಸಭೆಯಲ್ಲಿ ಈ ಕುರಿತು ಒಮ್ಮತ ಮೂಡಿ ಬಂದಿದೆ. ಸಂಯುಕ್ತ ಜನತಾ ದಳದ ಸಂಸದ ಹರಿವಂಶ್ ಈ ವರ್ಷ ಏಪ್ರಿಲ್‌ನಲ್ಲಿ ನಿವೃತ್ತರಾಗಿದ್ದರಿಂದ ರಾಜ್ಯಸಭೆ ಉಪಾಧ್ಯಕ್ಷರ ಸ್ಥಾನವೂ ತೆರವಾಗಿದೆ. ಮಾರ್ಚ್‌ನಲ್ಲಿ ಕೊನೆಗೊಂಡ ಬಜೆಟ್ ಅಧಿವೇಶನದಲ್ಲಿ ಲೋಕಸಭೆಯ ಡೆಪ್ಯುಟಿ ಸ್ಪೀಕರ್ ಸ್ಥಾನಕ್ಕೆ ಚುನಾವಣೆ ನಡೆಸಲಾಗಿರಲಿಲ್ಲ. ಮಳೆಗಾಲದ ಅಧಿವೇಶನ ಸೆ. 14ರಂದು ಆರಂಭವಾಗಲಿದೆ. ನಾಮಪತ್ರ ಸಲ್ಲಿಕೆಗೆ ಈ ತಿಂಗಳ 11 ಕೊನೆ ದಿನವಾಗಿದೆ.